Akashvani : Bangalore

Regional Bulletin

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.06.2024 18.40 hrs

ಮುಖ್ಯಾಂಶಗಳು

- ಸಂಡೂರು ಗಣಿಗಾರಿಕೆಯಿಂದ ಅರಣ್ಯನಾಶವಿಲ್ಲ; ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸ್ಪಷ್ಟನೆ
- ಕ್ರೀಡಾ ಇಲಾಖೆಯಲ್ಲಿ ಟೆಂಡರ್ ಇಲ್ಲದೇ ಕಾಮಗಾರಿ ಮಂಜೂರಾತಿ ಇಲ್ಲ ; ಸರ್ಕಾರದ ಸೂಚನೆ
- ರೇಣುಕಾಸ್ವಾಮಿ ಹತ್ಯೆ ಪ್ರಕರಣ ; ಯಾರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ - ಗೃಹ ಸಚಿವ ಡಾ. ಜಿ. ಪರಮೇಶ್ವರ್
- ಕೆ.ಸಿ. ವ್ಯಾಲಿ ಸಂಸ್ಕರಿಸಿದ ತ್ಯಾಜ್ಯ ನೀರು ಕೋಲಾರ, ಚಿಕ್ಕಬಳ್ಳಾಪುರದ ಕರೆಗಳಿಗೆ ತುಂಬಿಸುವ ವಾಗ್ದಾನ ನೀಡಿದ ಸಚಿವ ಬೈರತಿ ಸುರೇಶ್
- ವಿಧಾನಪರಿಷತ್ ಚುನಾವಣೆ ; ಜಗದೀಶ್ ಶೆಟ್ಟರ್ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಜುಲೈ ೧೨ ರಂದು ಮತದಾನ

<><*<><>*><>

ಬಳ್ಳಾರಿಯ ಸಂಡೂರು ವ್ಯಾಪ್ತಿಯ ದೇವದಾರಿ ಪ್ರದೇಶದಲ್ಲಿ ಕುದುರೆಮುಖ ಅದಿರು ಕಂಪನಿ ಕೈಗೆತ್ತಿಕೊಂಡಿರುವ ಗಣಿಗಾರಿಕೆ ಯೋಜನೆಯ ಬಗ್ಗೆ ಕಳವಳ ಬೇಡ ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಕೆಐಒಸಿಎಲ್ ಅಧಿಕಾರಿಗಳ ಜೊತೆ ಸಭೆ ನಡೆಸಿ ಮಾತನಾಡಿದ ಅವರು, ಅರಣ್ಯ ನಾಶದ ಆತಂಕ ಬೇಡ ಎಂದು ಹೇಳಿದರು. ರಾಜ್ಯದಲ್ಲಿ ಉಕ್ಕು ಉತ್ಪಾದನೆಯಾಗಬೇಕು ಹಾಗೂ ಯುವಕರಿಗೆ ಉದ್ಯೋಗ ದೊರೆಯಬೇಕು ಎಂದು ತಿಳಿಸಿದರು.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಎಲ್ಲಾ ಕಾಮಗಾರಿಗಳನ್ನು ಟೆಂಡರ್ ಆಹ್ವಾನಿಸಿಯೇ ಅನುಷ್ಠಾನಗೊಳಿಸುವಂತೆ ಅವರು ಸೂಚಿಸಿದರು. ೧೭೪ ಕೋಚ್‌ಗಳ ನೇಮಕಕ್ಕೆ ಸರ್ಕಾರ ಅನುಮೋದನೆ ನೀಡಿದ್ದು, ವೃಂದ ಮತ್ತು ನೇಮಕಾತಿ ನಿಯಮ ಅಂತಿಮಗೊಳಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು. ೧ ಸಾವಿರದ ೪೮೬ ಕ್ರೀಡಾಪಟುಗಳಿಗೆ ಕ್ರೀಡಾ ಪ್ರೋತ್ಸಾಹಧನ ನೀಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಕಂಠೀರವ ಕ್ರೀಡಾಂಗಣದಲ್ಲಿ ವಸ್ತುಸಂಗ್ರಹಾಲಯ ನಿರ್ಮಾಣ ಕಾರ್ಯದಲ್ಲಿ ಯಾವುದೇ ಪ್ರಗತಿ ಇಲ್ಲದಿರುವುದರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಯವರು ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಆಯುಕ್ತರಿಗೆ ಸೂಚಿಸಿದರು.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಎಲ್ಲಾ ಕಾಮಗಾರಿಗಳನ್ನು ಟೆಂಡರ್ ಆಹ್ವಾನಿಸಿಯೇ ಅನುಷ್ಠಾನಗೊಳಿಸುವಂತೆ ಅವರು ಸೂಚಿಸಿದರು. ೧೭೪ ಕೋಚ್‌ಗಳ ನೇಮಕಕ್ಕೆ ಸರ್ಕಾರ ಅನುಮೋದನೆ ನೀಡಿದ್ದು, ವೃಂದ ಮತ್ತು ನೇಮಕಾತಿ ನಿಯಮ ಅಂತಿಮಗೊಳಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು. ೧ ಸಾವಿರದ ೪೮೬ ಕ್ರೀಡಾಪಟುಗಳಿಗೆ ಕ್ರೀಡಾ ಪ್ರೋತ್ಸಾಹಧನ ನೀಡಲಾಗಿದೆ ಎಂದು

ಅಧಿಕಾರಿಗಳು ಮಾಹಿತಿ ನೀಡಿದರು. ಕಂಠೀರವ ಕ್ರೀಡಾಂಗಣದಲ್ಲಿ ವಸ್ತುಸಂಗ್ರಹಾಲಯ ನಿರ್ಮಾಣ ಕಾರ್ಯದಲ್ಲಿ ಯಾವುದೇ ಪ್ರಗತಿ ಇಲ್ಲದಿರುವುದರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿಯವರು ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಆಯುಕ್ತರಿಗೆ ಸೂಚಿಸಿದರು.

<><*<><>*><>

ಕೋಲಾರ ಜಿಲ್ಲೆ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಕೆರೆಗಳಿಗೆ ಕೆ.ಸಿ. ವ್ಯಾಲಿ ಕಣಿವೆಯ ನೀರನ್ನು ತುಂಬಿಸುವ ಪ್ರಕ್ರಿಯೆ ಹಾಗೂ ಕಾಮಗಾರಿಗಳ ಕುರಿತು ಕೋಲಾರ ಜಿಲ್ಲಾ ಉಸ್ತುವಾರಿ ಸಚಿವ ಭೈರತಿ ಸುರೇಶ್ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆ ಜರುಗಿತು. ಸಭೆಯಲ್ಲಿ ಬೆಂಗಳೂರು ನಗರದ ಕೋರಮಂಗಲ ಮತ್ತು ಚಲ್ಲಘಟ್ಟ ತ್ಯಾಜ್ಯ ನೀರನ್ನು ಸಂಸ್ಕರಿಸಿ ಕೋಲಾರ ಜಿಲ್ಲಾ ಮತ್ತು ಚಿಕ್ಕಬಳ್ಳಾಪುರ ತಾಲೂಕಿನ ಒಟ್ಟು ೧೨೬ ಕೆರೆಗಳನ್ನು ತುಂಬಿಸುವಂತೆ ಈ ಹಿಂದೆ ಆಗಿರುವ ಕರಾರಿನಂತೆ ಹರಿಸಬೇಕು ಎಂದು ಬೈರತಿ ಸುರೇಶ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸಂಸ್ಕರಿಸಿದ ತ್ಯಾಜ್ಯ ನೀರನ್ನು ಹೊಸಕೋಟೆ ಮತ್ತು ಆನೆಕಲ್ ಪಟ್ಟಣಗಳಿಗೆ ಬಿಡುತ್ತಿರುವುದು ಸರಿಯಾದ ಕ್ರಮವಲ್ಲ ಎಂದು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೯ ಕೋಟಿ ೨೬ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣವನ್ನು ವರ್ಗಾವಣೆ ಮಾಡಿದರು. ಉತ್ತರ ಪ್ರದೇಶದ ವಾರಾಣಸಿಯಲ್ಲಿ ನಡೆದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಸಮ್ಮೇಳನದಲ್ಲಿ ಅವರು ರೈತರ ಖಾತೆಗಳಿಗೆ ನೇರವಾಗಿ ಹಣ ವರ್ಗಾವಣೆ ಮಾಡಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಸಿಎಸ್ಆರ್ ಯೋಜನೆಯಡಿ ಒದಗಿಸಿರುವ ಸಂಚಾರಿ ಆರೋಗ್ಯ ವಾಹನಕ್ಕೆ ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ ಸಚಿವ ಕೆ.ಎಚ್ ಮುನಿಯಪ್ಪ ಚಾಲನೆ ನೀಡಿದ್ದಾರೆ. ಈ ವೇಳೆ ಮಾತನಾಡಿದ ಅವರು, ಆರೋಗ್ಯ ಕ್ಷೇತ್ರದಲ್ಲಿ ಸಿಎಸ್ಆರ್ ನಿಧಿ ಬಳಕೆಯಾಗುತ್ತಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಸಂಚಾರಿ ಆರೋಗ್ಯ ವಾಹನವು ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಹೇಳಿದರು. 'ವೆಲ್ ನೆಸ್ ಆನ್ ವ್ಹೀಲ್ಸ್' ಎಂಬ ಪರಿಕಲ್ಪನೆಯಲ್ಲಿ ಪ್ರಾರಂಭಗೊಂಡ ಸಂಚಾರಿ ಸಮುದಾಯ ಆರೋಗ್ಯ ಕೇಂದ್ರವು ಕ್ಯಾನ್ಸರ್, ಹೃದಯ ಸಂಬಂಧಿ ಸಮಸ್ಯೆಗಳು, ರೋಗನಿರ್ಣಯ ಸಮಸ್ಯೆಗಳಿಗೆ ಉಚಿತ ವೈದ್ಯಕೀಯ ಸೇವೆಗಳನ್ನು ಒದಗಿಸುವ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ನೂತನ ಮೈಲಿಗಲ್ಲು ಸೃಷ್ಟಿಸಲಿದೆ. ಗ್ರಾಮೀಣ ಪ್ರದೇಶದ ಜನರಿಗೂ ಗುಣಮಟ್ಟದ ವೈದ್ಯಕೀಯ ಸೌಲಭ್ಯ, ಚಿಕಿತ್ಸೆ ದೊರಕಿಸಿಕೊಡಲು ನೆರವಾಗಲಿದೆ ಎಂದು ತಿಳಿಸಿದ್ದಾರೆ.

<><*<><>*><>

ವಿಜಯಪುರ ಜಿಲ್ಲೆಯ ಅಭಿವೃದ್ಧಿಗಾಗಿ ಎಲ್ಲ ಅಧಿಕಾರಿಗಳು ಉತ್ತಮ ಆಡಳಿತ ನೀಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಭಿವೃದ್ಧಿ ವಿಷಯದಲ್ಲಿ ಅಸಡ್ಡೆ, ನಿರ್ಲಕ್ಷ್ಯ ತೋರಬಾರದು. ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲೆಯಾದ್ಯಂತ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಆಸ್ತಿ ಕಬಳಿಕೆ ಪ್ರಕರಣಗಳು, ಅಕ್ರಮ ಮದ್ಯ ಮಾರಾಟ, ಬೆಟ್ಟಿಂಗ್ ಸೇರಿದಂತೆ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಬೇಕು ಎಂದು ಸೂಚಿಸಿದ್ದಾರೆ.

<><*<><>*><>

ಜಗದೀಶ್ ಶೆಟ್ಟರ್ ರಾಜೀನಾಮೆಯಿಂದ ತೆರವಾಗಿದ್ದ ವಿಧಾನಪರಿಷತ್ ನ ಒಂದು ಸ್ಥಾನಕ್ಕೆ ಕೇಂದ್ರ ಚುನಾವಣಾ ಆಯೋಗ ಉಪ ಚುನಾವಣೆ ಘೋಷಣೆ ಮಾಡಿದೆ.  ಇದೇ ತಿಂಗಳ ೨೫ರಂದು ಅಧಿಸೂಚನೆ ಹೊರ ಬೀಳಲಿದ್ದು ನಾಮಪತ್ರಸಲ್ಲಿಕೆಗೆ ಜುಲೈ ೨ ಕೊನೆಯ ದಿನವಾಗಿದೆ. ನಾಮಪತ್ರ ಹಿಂಪಡೆಯಲು ಜುಲೈ ೫ ಅಂತಿಮ ದಿನವಾಗಿದ್ದು ಜುಲೈ ೧೨ರಂದು ಮತದಾನ ನಡೆಯಲಿದೆ. ಅಂದೇ ಫಲಿತಾಂಶ ಹೊರಬೀಳಲಿದೆ.

<><*<><>*><>

ರಾಜ್ಯ ಸರ್ಕಾರ ಆಸ್ತಿ ನಗದೀಕರಣ ಮಾಡಲು ಹೊರಟಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಈ ರೀತಿಯ ಕ್ರಮಗಳನ್ನು ಹಿಂದಿನ ಯಾವುದೇ ಸರ್ಕಾರಗಳು ಕೈಗೊಂಡಿರಲಿಲ್ಲ ಎಂದು ಅವರು ಹೇಳಿದ್ದಾರೆ. ಸರ್ಕಾರ ಬಡ ಹಾಗೂ ಸಾಮಾನ್ಯ ಜನರ ಮೇಲೆ ಬರೆ ಎಳೆಯುತ್ತಿದೆ ಎಂದು ಅವರು ದೂರಿದ್ದಾರೆ.

<><*<><>*><>

ರಾಜ್ಯದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮಾರಾಟ ತೆರಿಗೆಯನ್ನು ಹೆಚ್ಚಳ ಮಾಡಿರುವ ಸರ್ಕಾರದ ಕ್ರಮ ವಿರೋಧಿಸಿ ಬಿಜೆಪಿ ಇದೇ ೨೦ ರಂದು ರಾಜ್ಯಾದ್ಯಂತ ರಸ್ತೆ ರೋಖೋ ಚಳವಳಿ ನಡೆಸಲಿದೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತುಮಕೂರಿನಲ್ಲಿ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಿ, ತೈಲ ಬೆಲೆ ಇಳಿಸುವಂತೆ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಮಾತನಾಡಿದ ಸಂಸದ ಡಾ.ಕೆ.ಸುಧಾಕರ್ ರಾಜ್ಯದಲ್ಲಿ ಅಭಿವೃದ್ಧಿಗೆ ಆದ್ಯತೆ ನೀಡದ ಸರ್ಕಾರ ಬೆಲೆ ಏರಿಕೆ ಮಾಡಿದೆ ಎಂದು ದೂರಿದರು. ಪೆಟ್ರೋಲ್-ಡಿಸೇಲ್ ಸೇರಿದಂತೆ ದಿನಬಳಕೆ ವಸ್ತುಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರಿಗೆ ಆರ್ಥಿಕ ಹೊರೆ ಉಂಟಾಗುವ ರಾಜ್ಯ ಸರ್ಕಾರದ  ನೀತಿ ಖಂಡಿಸಿ ವಿಜಯನಗರ ಜಿಲ್ಲೆಯಲ್ಲಿ ಸೈಕಲ್ ಮತ್ತು ಎತ್ತಿನ ಬಂಡಿಗಳ ಮೂಲಕ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

<><*<><>*><>

ಕಬ್ಬು ಪೂರೈಕೆ ಮಾಡಿದ ರೈತರಿಗೆ ಬಾಕಿ ಹಣ ಸಂದಾಯ ಮಾಡದೇ ಇದ್ದಲ್ಲಿ ಮುಂದಿನ ದಿನಗಳಲ್ಲಿ ಬಸವೇಶ್ವರ ಶುಗರ್ಸ್ ಸಕ್ಕರೆ ಕಾರ್ಖಾನೆ ಹರಾಜಿಗೆ ಕ್ರಮ ವಹಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ. ಭೂಬಾಲನ್ ತಿಳಿಸಿದ್ದಾರೆ. ಬಸವೇಶ್ವರ ಸಕ್ಕರೆ ಕಾರ್ಖಾನೆಯವರು ೨೦೨೩-೨೪ನೇ ಸಾಲಿನ ಕಬ್ಬು ನುರಿಸುವ ಹಂಗಾಮಿಗೆ ಸಂಬಂಧಿಸಿದಂತೆ ರೈತರಿಗೆ ನೀಡಬೇಕಾಗಿರುವ ಬಾಕಿ ಹಣ ೬೮ ಕೋಟಿ ೪೪ ಲಕ್ಷ ರೂಪಾಯಿ ಪಾವತಿಸಿಲ್ಲ.  ನಿಗದಿತ ಅವಧಿಯಲ್ಲಿ ಹಣವನ್ನು ಬಡ್ಡಿ ಸಮೇತ ಪಾವತಿಸದೇ ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ ೧೯೬೪ರನ್ವಯ ಸಕ್ಕರೆ ಕಾರ್ಖಾನೆಯನ್ನು ಹರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಗದಗ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದಾದ ಹಾನಿ ಕುರಿತಂತೆ ಪರಿಶೀಲನಾ ಸಭೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅಧ್ಯಕ್ಷತೆಯಲ್ಲಿ ಜರುಗಿತು.  ಸಾರ್ವಜನಿಕರ ಆಸ್ತಿ ಪಾಸ್ತಿ ಹಾನಿ ತಪ್ಪಿಸಲು ಅಗತ್ಯದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಅವರು  ಸೂಚಿಸಿದರು.  ಅತಿವೃಷ್ಟಿಯಿಂದ ಪ್ರವಾಹ ಉಂಟಾಗಬಹುದಾದ ೧೧ ಗ್ರಾಮಗಳನ್ನು ಹಾಗೂ ನಗರ ಪ್ರದೇಶದ ೧೪ ವಾರ್ಡ್‌ಗಳನ್ನು ಗುರುತಿಸಲಾಗಿದೆ.

ಅಧಿಕ ಪ್ರಮಾಣದ ಮಳೆ ಸುರಿದಲ್ಲಿ ತಕ್ಷಣ ಅಧಿಕಾರಿಗಳು ಗುರುತಿಸಲಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ನಿಯಂತ್ರಣ ಕುರಿತಂತೆ ಕ್ರಮ ವಹಿಸಬೇಕು ಎಂದು ಆದೇಶಿಸಿದ್ದಾರೆ.

**<><*<><>*><**

**ಸಂಕ್ಷಿಪ್ತ ಸುದ್ದಿಗಳು**

೧. ಕುವೈತ್ ಅಗ್ನಿ ದುರಂತದಲ್ಲಿ ಮೃತಪಟ್ಟಿರುವ ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ವಿಜಯ್‌ಕುಮಾರ್ ಕುಟುಂಬಕ್ಕೆ ೫ ಲಕ್ಷ ಪರಿಹಾರ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದ್ದಾರೆ.

೨. ಎಲ್ಲ ತಾಲೂಕು ಕೇಂದ್ರಗಳಲ್ಲಿ ಕೆಂಪೇಗೌಡರ ಜಯಂತಿ ಆಚರಿಸಲು ೧ ಲಕ್ಷ ರೂಪಾಯಿ ನೀಡಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಬಿ.ಎಲ್. ಶಂಕರ್ ಅವರ ನೇತೃತ್ವದಲ್ಲಿ ಕೆಂಪೇಗೌಡ ಪ್ರಶಸ್ತಿ ಆಯ್ಕೆ ಸಮಿತಿ ರಚನೆ ಮಾಡಲಾಗಿದೆ ಎಂದು ಹೇಳಿದರು.

೩. ಅಟಲ್ ಜನ ಸ್ನೇಹಿ ಕೇಂದ್ರ ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ನೀಡುವಲ್ಲಿ, ಮಾಲೂರು ತಾಲ್ಲೂಕು ಕಸಬಾ ಹೋಬಳಿ ರಾಜ್ಯದಲ್ಲೇ ದ್ವಿತೀಯ ಶ್ರೇಯಾಂಕದಲ್ಲಿರುವ ಹಿನ್ನಲೆಯಲ್ಲಿ ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷಾ ಕಂದಾಯ ಇಲಾಖೆ ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮ ಆಡಳಿತ ಅಧಿಕಾರಿಗಳನ್ನು ಅಭಿನಂದಿಸಿ ಪ್ರಶಸ್ತಿ ಪತ್ರಗಳನ್ನು ವಿತರಿಸಿದರು.

೪. ನಮ್ಮ ದೇಶ ಹಲವಾರು ಕ್ಷೇತ್ರಗಳಲ್ಲಿ ಪ್ರಗತಿ ಸಾಧಿಸಿದರೂ, ಗ್ರಾಮೀಣ ಭಾಗಗಳಲ್ಲಿ ಸಾಮಾಜಿಕ ಪಿಡುಗಾದ ಬಾಲ್ಯ ವಿವಾಹ ಪ್ರಕರಣಗಳು ಇನ್ನೂ ಕಂಡು ಬರುತ್ತಿವೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಶಿಶು ಅಭಿವೃದ್ಧಿ ಯೋಜನೆ ಇಲಾಖೆ ಕಾರ್ಯಕರ್ತೆಯರು ಇದನ್ನು ತಡೆಯಲು ಗಮನ ಹರಿಸಬೇಕೆಂದು ಯಾದಗಿರಿ ಜಿಲ್ಲೆಯ ಗುರುಮಿಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಸಲಹೆ ನೀಡಿದ್ದಾರೆ.

೫. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇದೇ ೨೭ರಂದು ರಾಮನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಆಚರಿಸಲು ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದ್ದಾರೆ.

೬. ಧಾರವಾಡ ಜಿಲ್ಲೆಯನ್ನು ಡೆಂಘಿ ಮುಕ್ತ ಜಿಲ್ಲೆಯನ್ನಾಗಿಸಲು ಜಿಲ್ಲಾಡಳಿತ ಪಣತೊಟ್ಟಿದ್ದು, ಆರೋಗ್ಯ ಇಲಾಖೆ ಹಾಗೂ ನೋಡಲ್ ಅಧಿಕಾರಿಗಳು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಮನವಿ ಮಾಡಿದ್ದಾರೆ.

**<><*<><>*><**

ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ಸಹಯೋಗದೊಂದಿಗೆ, ರಾಷ್ಟ್ರೀಯ ಕಯಾಕಿಂಗ್ ಮತ್ತು ಕ್ಯಾನೋಯಿಂಗ್ ಸಂಸ್ಥೆ ಮತ್ತು ಕರ್ನಾಟಕ ಕಯಾಕಿಂಗ್ ಮತ್ತು ಕ್ಯಾನೋಯಿಂಗ್ ಸಂಸ್ಥೆ ವತಿಯಿಂದ ರಾಷ್ಟ್ರೀಯ ಕ್ಯಾನೋ ಸ್ಲಾಲೊಮ್ ಮತ್ತು ಕಯಾಕ್ ಕ್ರಾಸ್ ಪಂದ್ಯಾವಳಿಯನ್ನು ರಾಜ್ಯದಲ್ಲಿ ಮೊದಲ ಬಾರಿಗೆ ಆಯೋಜಿಸಲಾಗುತ್ತಿದೆ. ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿ ನಾಳೆಯಿಂದ ಇದೇ ೨೧ ರವರೆಗೆ ನಡೆಯಲಿದೆ.  ಈ ಕುರಿತು ಮಾಹಿತಿ ನೀಡಿದ ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರವಿ ನಾಯ್ಕ, ಈ ಪಂದ್ಯಾವಳಿಯಲ್ಲಿ ಹಲವಾರು ಅಂತಾರಾಷ್ಟ್ರೀಯ ಆಟಗಾರರು, ೧೩ ರಾಜ್ಯಗಳ ಹಾಗೂ ಭಾರತೀಯ ಸೇನೆಯ ಸೇರಿದಂತೆ ಒಟ್ಟು ೧೧೫ ಸ್ಪರ್ಧಿಗಳು ಭಾಗವಹಿಸಲಿದ್ದಾರೆ.

<>*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*<>

<>*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*<>